ಮಂಜೂರಾತಿಗೆ ಜಿಲ್ಲಾಧಿಕಾರಿಗಳ ಕಛೇರಿಯಿಂದ ಅನುಮೋದನೆ ಕೋರಿ ಪ್ರಾದೇಶಿಕ ಆಯುಕ್ತರು, ಬೆಳಗಾಂ ವಿಭಾಗ ರವರಿಗೆ ದಿನಾಂಕ: 10.06.2014ರಂದು ಕಳುಹಿಸಲಾಗಿದೆ.

(ಇ) ರಾಯಭಾಗ ತಾಲ್ಲುಕಿನಲ್ಲಿ ಮೆಂಬಳಿ ಗ್ರಾಮಕ್ಕೆ ಯಾವುದೇ ವರ್ಗದ ವಸತಿ ಶಾಲೆ ಮಂಜೂರಾಗಿರುವುದಿಲ್ಲ.

ಸರ್ಕಾರಿ ಆಸ್ಪತ್ರೆಗಳನ್ನು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸುವುದು. ಸರ್ಕಾರಿ ಆಸ್ಪತ್ರೆಗಳನ್ನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವುದು.

733 (1205); ಶ್ರೀ ಅಖಂಡ ಶ್ರೀನಿವಾಸಮೂರ್ತಿ ಆರ್. (ಪುಲಕೇಶಿ ನಗರ)

(ಅ) ಪುಲಕೇಶಿ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಸರ್ಕಾರಿ ಆಸ್ಪತ್ರೆಗಳನ್ನು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಸರ್ಕಾರಿ ಆಸ್ಪತ್ರೆಗಳನ್ನು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ಮುಂದಿರುವುದಿಲ್ಲ.

(ಆ) ಉದ್ಭವಿಸುವುದಿಲ್ಲ.

ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು:

735 (1262); ಶ್ರೀ ಆನಂದ ಸಿಂಗ್ (ವಿಜಯನಗರ–ಬಳ್ಳಾರಿ)

(ಅ) ಹೊಸಪೇಟೆ ತಾಲ್ಲೂಕಿನ ವಿಜಯನಗರ ಮತಕ್ಷೇತ್ರ ವ್ಯಾಪ್ತಿಯ 100 ಹಾಸಿಗೆಗಳ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;